## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 23 (297) |
| **ಸದಸ್ಯರ ಹೆಸರು** | : | ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : | 12.08.2025 |
| **ಉತ್ತರಿಸುವವರು** | : | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 1200 ಚದರಡಿ ಅಳತೆಯ ನಿವೇಶನಗಳಲ್ಲಿ ಕಟ್ಟಿರುವ 3 ಅಂತಸ್ತಿನ ಕಟ್ಟಡದ ಮಾಲೀಕರಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (ಎನ್.ಒ.ಸಿ) ಪಡೆಯುವುದಕ್ಕೆ ವಿನಾಯಿತಿ ನೀಡಲಾಗಿದೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 1200 ಚದರಡಿ ಮೀರದಂತಹ ನಿವೇಶನಗಳಲ್ಲಿ ನೆಲ+2 ಅಂತಸ್ತು ಅಥವಾ ಸ್ಟಿಲ್ಟ್+3 ಅಂತಸ್ತಿನವರೆಗಿನ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಟ್ಟಡ ನಿರ್ಮಾಣದ ನಂತರ ಸ್ವಾಧೀನಾನುಭವ ಪ್ರಮಾಣ ಪತ್ರದಿಂದ ವಿನಾಯಿತಿ ನೀಡುವುದು ಪರಿಶೀಲನೆಯಲ್ಲಿದೆ. |
| ಆ) | ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ-2024 ರನ್ವಯ ಸರ್ಕಾರ ಹೊರಡಿಸಿದ ಅಧಿಸೂಚನೆಯಿಂದ ಗ್ರಾಮ ಪಂಚಾಯತಿ, ನಗರ ಸಭೆ ಮತ್ತು ಪುರಸಭೆಗಳಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲು ಪ್ರಸ್ತುತ ಇರುವ ಬೈಲಾಗಳಿಂದ ಕಟ್ಟಡ ಮಾಲೀಕರಿಗೆ ಅಡಚಣೆಯಾಗುವುದಿಲ್ಲವೇ: | ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024 ರನ್ವಯ ಹೊರಡಿಸಲಾದ ಅಧಿಸೂಚನೆಯು ನಗರ ಸ್ಥಳೀಯ ಸಂಸ್ಥೆಗಳಿಗೆ ಅನ್ವಯಿಸುವುದಿಲ್ಲ. |
| ಇ) | ರಾಜ್ಯದ ಎಲ್ಲಾ ಗ್ರಾಮ ಮತ್ತು ನಗರಗಳಲ್ಲಿ ಕಟ್ಟಡ ಮಾಲೀಕರು ಈ ರೀತಿ ಸ್ವಾಧೀನಾನುಭವ ಪ್ರಮಾಣ ಪತ್ರ (ಎನ್.ಒ.ಸಿ) ವಿನಾಯಿತಿ ಪಡೆಯಬೇಕಿದ್ದರೆ, ಈ ಯೋಜನೆ ಅನುಷ್ಠಾನಗೊಳಿಸಲು ಸಾಧ್ಯವಾಗುವುದೇ: ಹಾಗಿದ್ದಲ್ಲಿ, ಇದರ ಕುರಿತು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ಒದಗಿಸುವುದು) | ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ 1976 ರಲ್ಲಿ ಕಟ್ಟಡ ನಿರ್ಮಾಣದ ನಂತರ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯಬೇಕಾಗುತ್ತದೆ.<br><br>ಕೆಲವೊಂದು ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರದಿಂದ ವಿನಾಯಿತಿ ನೀಡುವ ಕುರಿತು ಕಾಯ್ದೆಗಳ ತಿದ್ದುಪಡಿ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ನಅಇ 197 ಜಿಇಎಲ್ 2025

( ರಹೀಂ ಖಾನ್ )
ಪೌರಾಡಳಿತ ಮತ್ತು ಹಜ್ ಸಚಿವರು